# ಕರ್ನಾಟಕ ವಿಧಾನ ಪರಿಷತ್ತು

| | | |
|---|---|---|
| ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ | : | 1273(1441) |
| ಸದಸ್ಯರ ಹೆಸರು | : | ಶ್ರೀ ತಿಪ್ಪಣ್ಣಪ್ಪ ಕಮಕನೂರ (ವಿಧಾನಸಭೆಯಿಂದ ಚುನಾಯಿತರಾದವರು) |
| ಉತ್ತರಿಸಬೇಕಾದ ದಿನಾಂಕ | : | 16.03.2026 |
| ಉತ್ತರಿಸುವವರು | : | ಮಾನ್ಯ ಉನ್ನತ ಶಿಕ್ಷಣ ಸಚಿವರು |

| ಕ್ರ. ಸಂ. | ಪ್ರಶ್ನೆ | ಉತ್ತರ |
|---|---|---|
| ಅ) | ಕಲಬುರಗಿ ಜಿಲ್ಲೆಯಲ್ಲಿರುವ ಸರ್ಕಾರಿ ಮತ್ತು ಅನುದಾನಿತ ಪದವಿ ಹಾಗೂ ತಾಂತ್ರಿಕ ಕಾಲೇಜುಗಳಲ್ಲಿ ವಿದ್ಯಾರ್ಥಿಗಳಿಗಾಗಿ ಪ್ರತ್ಯೇಕ **'ಉದ್ಯೋಗ ಮಾರ್ಗದರ್ಶನ ಮತ್ತು ಮಾಹಿತಿ ಕೇಂದ್ರ'** ಗಳು (Placement Cells) ಕಾರ್ಯನಿರ್ವಹಿಸುತ್ತಿವೆಯೇ; | ಕಲಬುರಗಿ ಜಿಲ್ಲೆಯನ್ನೂ ಒಳಗೊಂಡಂತೆ, ಎಲ್ಲಾ ಜಿಲ್ಲೆಗಳಲ್ಲಿ ಕಾಲೇಜು ಶಿಕ್ಷಣ ಇಲಾಖಾ ವ್ಯಾಪ್ತಿಯ ಸರ್ಕಾರಿ ಪ್ರಥಮ ದರ್ಜೆ ಕಾಲೇಜುಗಳಲ್ಲಿ ವ್ಯಾಸಂಗ ಮಾಡುವ ವಿದ್ಯಾರ್ಥಿಗಳಿಗೆ ಉದ್ಯೋಗಾರ್ಹತೆಯನ್ನು ವರ್ಧಿಸುವ ಸಲುವಾಗಿ ಹಾಗೂ ಉದ್ಯೋಗವಕಾಶ ಗಳನ್ನು ಕಲ್ಪಿಸಲು ಪ್ರತೀ ಕಾಲೇಜಿನಲ್ಲಿ ಉದ್ಯೋಗ ಮಾರ್ಗದರ್ಶನ ಮತ್ತು ಮಾಹಿತಿ ಕೇಂದ್ರ (Placement Cells)ಗಳು ಕಾರ್ಯನಿರ್ವಹಿಸುತ್ತಿವೆ.<br><br>ಮುಂದುವರೆದು, ಕಲಬುರಗಿ ಜಿಲ್ಲೆಯಲ್ಲಿ ತಾಂತ್ರಿಕ ಶಿಕ್ಷಣ ಇಲಾಖೆಯಡಿ ಕಾರ್ಯನಿರ್ವಹಿಸುತ್ತಿರುವ ಸರ್ಕಾರಿ ಮತ್ತು ಅನುದಾನಿತ ಪಾಲಿಟೆಕ್ನಿಕ್ ಸಂಸ್ಥೆಗಳಲ್ಲಿ ಸಹ ವಿದ್ಯಾರ್ಥಿಗಳಿಗಾಗಿ ಪ್ರತ್ಯೇಕ 'ಉದ್ಯೋಗ ಮಾರ್ಗದರ್ಶನ ಮತ್ತು ಮಾಹಿತಿ ಕೇಂದ್ರ'ಗಳು (Placement Cells) ಕಾರ್ಯನಿರ್ವಹಿಸುತ್ತಿವೆ. |
| ಆ) | ಕಳೆದ ಮೂರು ವರ್ಷಗಳಲ್ಲಿ ಜಿಲ್ಲೆಯ ವಿವಿಧ ಕಾಲೇಜುಗಳಿಂದ ಕ್ಯಾಂಪಸ್ ಪ್ಲೇಸ್‌ಮೆಂಟ್ ಮೂಲಕ ಉದ್ಯೋಗ ಪಡೆದ ವಿದ್ಯಾರ್ಥಿಗಳ ಸಂಖ್ಯೆ ಎಷ್ಟು; (ವರ್ಷವಾರು ಮತ್ತು ತಾಲ್ಲೂಕುವಾರು ಮಾಹಿತಿ ನೀಡುವುದು) | ಸರ್ಕಾರಿ ಪ್ರಥಮ ದರ್ಜೆ ಕಾಲೇಜುಗಳಿಗೆ ಸಂಬಂಧಿಸಿದಂತೆ ಕಳೆದ ಮೂರು ವರ್ಷಗಳಲ್ಲಿ ಜಿಲ್ಲೆಯ ವಿವಿಧ ಕಾಲೇಜುಗಳಿಂದ ಕ್ಯಾಂಪಸ್ ಪ್ಲೇಸ್‌ಮೆಂಟ್ ಮೂಲಕ ಉದ್ಯೋಗ ಪಡೆದ ವಿದ್ಯಾರ್ಥಿಗಳ ವರ್ಷವಾರು ಮತ್ತು ತಾಲ್ಲೂಕುವಾರು ಮಾಹಿತಿಯು ಈ ಕೆಳಕಂಡಂತಿದೆ. |

| ಕ್ರ ಸಂ | ತಾಲ್ಲೂಕು | ಕ್ಯಾಂಪಸ್ ಪ್ಲೇಸ್‌ಮೆಂಟ್ ಮೂಲಕ ಉದ್ಯೋಗ ಪಡೆದ ವಿದ್ಯಾರ್ಥಿಗಳ ಸಂಖ್ಯೆ | | |
|---|---|---|---|---|
| | | 2022-23 | 2023-24 | 2024-25 |
| 1. | ಅಫಜಲಪುರ | 52 | 121 | 148 |
| 2. | ಆಳಂದ | 26 | 47 | 68 |
| 3. | ಚಿಂಚೋಳಿ | 31 | 53 | 75 |

<table>
<tr>
<td></td>
<td></td>
<td>
<table>
<tr><td>4.</td><td>ಚಿತ್ತಾಪುರ</td><td>24</td><td>30</td><td>34</td></tr>
<tr><td>5.</td><td>ಜೇವರ್ಗಿ</td><td>38</td><td>54</td><td>72</td></tr>
<tr><td>6.</td><td>ಕಲಬುರಗಿ</td><td>294</td><td>351</td><td>501</td></tr>
<tr><td>7.</td><td>ಕಾಳಗಿ</td><td>15</td><td>10</td><td>16</td></tr>
<tr><td>8.</td><td>ಕಮಲಾಪುರ</td><td>21</td><td>24</td><td>19</td></tr>
<tr><td>9.</td><td>ಸೇಡಂ</td><td>92</td><td>101</td><td>125</td></tr>
</table>
ಕಳೆದ ಮೂರು ವರ್ಷಗಳಲ್ಲಿ ಕಲಬುರಗಿ ಜಿಲ್ಲೆಯಲ್ಲಿ ತಾಂತ್ರಿಕ ಶಿಕ್ಷಣ ಇಲಾಖೆಯಡಿ ಕಾರ್ಯ ನಿರ್ವಹಿಸುತ್ತಿರುವ ಸರ್ಕಾರಿ/ಅನುದಾನಿತ ಪಾಲಿಟೆಕ್ನಿಕ್ ಮತ್ತು ಇಂಜಿನಿಯರಿಂಗ್ ಕಾಲೇಜುಗಳಲ್ಲಿ ಕ್ಯಾಂಪಸ್ ಪ್ಲೇಸ್‌ಮೆಂಟ್ ಮೂಲಕ ಉದ್ಯೋಗ ಪಡೆದ ವಿದ್ಯಾರ್ಥಿಗಳ ವಿವರಗಳು ಈ ಕೆಳಕಂಡಂತಿದೆ.
<table>
<tr><th>ತಾಲೂಕಿನ ಹೆಸರು</th><th>2022-23</th><th>2023-24</th><th>2024-25</th></tr>
<tr><td>ಕಲಬುರಗಿ</td><td>52</td><td>102</td><td>71</td></tr>
<tr><td>ಅಫಜಲಪುರ</td><td>12</td><td>14</td><td>44</td></tr>
<tr><td>ಕಲ್ಗಿ</td><td>0</td><td>0</td><td>21</td></tr>
<tr><td>ಪಿ.ಡಿ.ಎ ಇಂಜಿನಿರಿಂಗ್ ಕಾಲೇಜು, ಕಲಬುರಗಿ</td><td>410</td><td>283</td><td>341</td></tr>
</table>
</td>
</tr>
<tr>
<td>ಇ)</td>
<td>ಜಿಲ್ಲಾ ಉದ್ಯೋಗ ವಿನಿಮಯ ಕೇಂದ್ರ ಅಥವಾ ಕಾಲೇಜುಗಳ ವತಿಯಿಂದ ಕಳೆದ ಎರಡು ವರ್ಷಗಳಲ್ಲಿ ಎಷ್ಟು 'ಬೃಹತ್ ಉದ್ಯೋಗ ಮೇಳ' ಗಳನ್ನು ಆಯೋಜಿಸಲಾಗಿದೆ; ಇದರಿಂದ ಎಷ್ಟು ಅಭ್ಯರ್ಥಿಗಳು ನೇಮಕಾತಿ ಪತ್ರ ಪಡೆದಿದ್ದಾರೆ;</td>
<td>ಕಳೆದ ಎರಡು ವರ್ಷಗಳಲ್ಲಿ ಆಯೋಜಿಸಲಾದ 'ಬೃಹತ್ ಉದ್ಯೋಗ ಮೇಳ' ಗಳಲ್ಲಿ ನೇಮಕಾತಿ ಪಡೆದ ಅಭ್ಯರ್ಥಿಗಳ ವಿವರ ಈ ಕೆಳಕಂಡಂತಿದೆ.
<table>
<tr><th>ಕ್ರ ಸಂ</th><th>ವರ್ಷ</th><th>ಬೃಹತ್ ಉದ್ಯೋಗ ಮೇಳಗಳಲ್ಲಿ ನೇಮಕಾತಿ ಪಡೆದ ಅಭ್ಯರ್ಥಿಗಳ ಸಂಖ್ಯೆ</th></tr>
<tr><td>1.</td><td>2023-24</td><td>791</td></tr>
<tr><td>2.</td><td>2024-25</td><td>1058</td></tr>
</table>
</td>
</tr>
<tr>
<td>ಈ)</td>
<td>ಕಲಬುರಗಿ ಜಿಲ್ಲೆಯ ಎಷ್ಟು ಉನ್ನತ ಶಿಕ್ಷಣ ಸಂಸ್ಥೆಗಳು ಕೈಗಾರಿಕೆಗಳು ಅಥವಾ ಪ್ರತಿಷ್ಠಿತ ಕಂಪನಿಗಳೊಂದಿಗೆ ಪ್ರಾಯೋಗಿಕ ತರಬೇತಿ ಹಾಗೂ ಉದ್ಯೋಗಕ್ಕಾಗಿ ಒಪ್ಪಂದ (MOU) ಮಾಡಿಕೊಂಡಿವೆ;</td>
<td>ಉನ್ನತ ಶಿಕ್ಷಣ ಇಲಾಖೆಯು ಸರ್ಕಾರಿ ಪ್ರಥಮ ದರ್ಜೆ ಕಾಲೇಜುಗಳ ವಿದ್ಯಾರ್ಥಿಗಳಲ್ಲಿ ಕೌಶಲ್ಯವನ್ನು ವರ್ಧಿಸುವ ಸಲುವಾಗಿ ವಿವಿಧ ಸಂಸ್ಥೆಗಳೊಂದಿಗೆ 20ಕ್ಕೂ ಹೆಚ್ಚು ಒಡಂಬಡಿಕೆಗಳನ್ನು ಮಾಡಿಕೊಳ್ಳಲಾಗಿದ್ದು, ಕಲಬುರಗಿ ಜಿಲ್ಲೆಯ 04 ಪಾಲಿಟೆಕ್ನಿಕ್, 02 ಅನುದಾನಿತ ಪಾಲಿಟೆಕ್ನಿಕ್ ಮತ್ತು 01 ಅನುದಾನಿತ ಇಂಜಿನಿಯರಿಂಗ್ ಸಂಸ್ಥೆಗಳು ಕೈಗಾರಿಕೆಗಳು ಅಥವಾ ಪ್ರತಿಷ್ಠಿತ ಕಂಪನಿಗಳೊಂದಿಗೆ ಪ್ರಾಯೋಗಿಕ ತರಬೇತಿ ಹಾಗೂ ಉದ್ಯೋಗಕ್ಕಾಗಿ ಒಪ್ಪಂದ (MOU) ಮಾಡಿಕೊಂಡಿವೆ.</td>
</tr>
</table>

| | | |
|---|---|---|
| ಉ) | ವಿದ್ಯಾರ್ಥಿಗಳ ಉದ್ಯೋಗಾರ್ಹತೆ ಹೆಚ್ಚಿಸಲು 'ಕೌಶಲ ಕರ್ನಾಟಕ' ಅಥವಾ ಇತರ ಯೋಜನೆಗಳಡಿ ಜಿಲ್ಲೆಯಲ್ಲಿ ಹಮ್ಮಿಕೊಳ್ಳಲಾದ ವಿಶೇಷ ತರಬೇತಿ ಕಾರ್ಯಕ್ರಮಗಳು ಯಾವುವು? | **1.ಅಪ್ರೆಂಟಿಸ್‌ಶಿಪ್ ಎಂಬೆಡೆಡ್ ಪದವಿ ಕಾರ್ಯಕ್ರಮ (AEDP): ಸ್ಟೈಪೆಂಡ್ ಸಹಿತ ಉದ್ಯೋಗಾಭಿಮುಖ ಪದವಿ ಕೋರ್ಸ್:**<br><br>ರಾಜ್ಯದಲ್ಲಿ ಪ್ರಪ್ರಥಮ ಬಾರಿಗೆ ಅಪ್ರೆಂಟಿಸ್‌ಶಿಪ್ ಎಂಬೆಡೆಡ್ ಪದವಿ ಕಾರ್ಯಕ್ರಮವನ್ನು Centre for Research in Schemes and Policies (CRISP) ಮತ್ತು Sector Skill Councils (SSCs) ಗಳ ಸಹಭಾಗಿತ್ವದಲ್ಲಿ 2024-25ನೇ ಶೈಕ್ಷಣಿಕ ವರ್ಷದಲ್ಲಿ ಆಯ್ದ 43 ಸರ್ಕಾರಿ ಪ್ರಥಮ ದರ್ಜೆ ಕಾಲೇಜುಗಳಲ್ಲಿ ಪ್ರಾರಂಭಿಸಲಾಯಿತು. ಈ ಉಪಕ್ರಮ ರಾಜ್ಯದ ಉನ್ನತ ಶಿಕ್ಷಣ ಸಂಸ್ಥೆಗಳ ಪ್ರಗತಿಯಲ್ಲಿ ಒಂದು ಪ್ರಮುಖ ಮೈಲಿಗಲ್ಲಾಗಿದೆ.<br><br>**2. ಕಲಿಕೆ ಜೊತೆ ಕೌಶಲ್ಯ ತರಬೇತಿ ಕಾರ್ಯಕ್ರಮ:**<br><br>ಪದವಿ ವಿದ್ಯಾರ್ಥಿಗಳ ಉದ್ಯೋಗಾರ್ಹತೆಯನ್ನು ವರ್ಧಿಸುವ ಸಲುವಾಗಿ ಸರ್ಕಾರಿ ಕಾಲೇಜುಗಳ 6ನೇ ಸೆಮಿಸ್ಟರ್ ಪದವಿ ವಿದ್ಯಾರ್ಥಿಗಳಿಗೆ 'ಕಲಿಕೆ ಜೊತೆ ಕೌಶಲ್ಯ' ಕಾರ್ಯಕ್ರಮವನ್ನು ಕರ್ನಾಟಕ ಕೌಶಲ್ಯ ಅಭಿವೃದ್ಧಿ ನಿಗಮದ ಸಹಭಾಗಿತ್ವದಲ್ಲಿ 2023-24ನೇ ಶೈಕ್ಷಣಿಕ ಸಾಲಿನಿಂದ ಅನುಷ್ಠಾನಗೊಳಿಸಲಾಗಿದೆ. ತಾಂತ್ರಿಕ ಶಿಕ್ಷಣ ಇಲಾಖೆಯಡಿ ಕಾರ್ಯನಿರ್ವಹಿಸುತ್ತಿರುವ ಸಂಸ್ಥೆಗಳಲ್ಲಿನ ವಿದ್ಯಾರ್ಥಿಗಳ ಉದ್ಯೋಗಾರ್ಹತೆ ಹೆಚ್ಚಿಸಲು ಕಲಿಕೆ ಜೊತೆ ಕೌಶಲ್ಯ ಯೋಜನೆಯಡಿ ಈ ಕೆಳಕಂ0CA1 ವಿಶೇಷ ತರಬೇತಿಗಳನ್ನು ಆಯೋಜಿಸಲಾಗಿರುತ್ತದೆ.<br>1.AutoCAD Electrical<br>2.CNC Machinist<br>3.Additive Manufacturing (3D Printing)<br>4. Cisco Certified Network Associate (CCNA) Routing and Switching<br><br>**3. UNXT: ಉದ್ಯೋಗ ಮತ್ತು ಜೀವನ-ಕೌಶಲ್ಯ ತರಬೇತಿ:**<br><br>ಉದ್ಯೋಗಾರ್ಹತೆ ಮತ್ತು ಜೀವನ ಕೌಶಲ್ಯಗಳ ತರಬೇತಿ ಮತ್ತು ವಿದ್ಯಾರ್ಥಿಗಳಿಗೆ ವೃತ್ತಿ ಆಧಾರಿತ ಮತ್ತು ಸಾಮಾಜಿಕ ಪರಿವರ್ತನಾ ತರಬೇತಿ.<br><br>**4.ಉದ್ಯೋಗ ಕೌಶಲ್ಯ ತರಬೇತಿ ಕಾರ್ಯಕ್ರಮ:**<br><br>ವಾಧ್ವಾನಿ ಫೌಂಡೇಶನ್ ಸಂಸ್ಥೆಯು ಉದ್ಯೋಗ ಕೌಶಲ್ಯ ತರಬೇತಿಯನ್ನು ಸರ್ಕಾರಿ ಪ್ರಥಮ ದರ್ಜೆ ಕಾಲೇಜುಗಳ ವಿದ್ಯಾರ್ಥಿಗಳಿಗೆ ಅನುಷ್ಠಾಗೊಳಿಸುತ್ತಿದೆ.<br><br>**5.ಮೆಂಟರಿಂಗ್ ತರಬೇತಿ:**<br><br>ಯುವಜನತೆಗೆ ಉತ್ತಮ ಗುಣಮಟ್ಟದ ಡಿಜಿಟಲ್ ಮೆಂಟರ್ ಶಿಪ್, ಕೌಶಲ್ಯಗಳು ಮತ್ತು ನೆಟ್‌ವರ್ಕ್‌ಗಳ ಸುಲಭ ಲಭ್ಯತೆಯನ್ನು ಡಿಜಿಟಲ್ ವೇದಿಕೆಯ ಮೂಲಕ ದೊರಕಿಸಿಕೊಡುತ್ತಿದೆ. |

| | | |
|---|---|---|
| | | **6. ಕಿಟ್ಸ್ ಮತ್ತು ಮೆಟಾ: ಡಿಜಿಟಲ್ ನಾಗರಿಕ (Digital Nagarik) ಉಪಕ್ರಮ:**<br><br>ಡಿಜಿಟಲ್ ಭದ್ರತಾ ಕೌಶಲಗಳು, ಭವಿಷ್ಯದ ತಂತ್ರಜ್ಞಾನಗಳು ಮತ್ತು ಅವುಗಳ ಅನ್ವಯಗಳ ಬಗ್ಗೆ ಜಾಗೃತಿ ಮೂಡಿಸುತ್ತದೆ. |

**ಸಂಖ್ಯೆ:ಇಡಿ 105 ಡಿಸಿಇ 2026(ಇ)**

**(ಡಾ: ಎಂ.ಸಿ ಸುಧಾಕರ್)**
ಉನ್ನತ ಶಿಕ್ಷಣ ಸಚಿವರು